ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ವಸತಿ ಶಿಕ್ಷಣ ಸಂಸ್ಥೆಯ ಸಿಬ್ಬಂದಿಗಳಿಗೆ ಸೌಲಭ್ಯ ಕಲ್ಪಿಸುವ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

1051 (1158) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕ್ರೈಸ್ಟ್ ಸಂಸ್ಥೆಯ (ವಸತಿ ಶಿಕ್ಷಣ ಸಂಸ್ಥೆ) ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ಸರ್ಕಾರಿ ನೌಕರರಿಗೆ ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ, ಕೆ.ಜಿ.ಐ.ಡಿ ಹಾಗೂ ಎ.ಜಿ.ಐ.ಎಸ್. ಸೌಲಭ್ಯಗಳನ್ನು ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಸದರಿ ಸೌಲಭ್ಯಗಳನ್ನು ಕಲ್ಪಿಸಲಾಗುವುದು;

(ಈ) ಸದರಿ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಇದುವರೆವಿಗೂ ಮುಂಬಡ್ತಿ ನೀಡದಿರಲು ಕಾರಣಗಳೇನು; (ವಿವರ ನೀಡುವುದು)

(ಊ) ಯಾವ ಕಾಲಮಿತಿಯಲ್ಲಿ ಅವರಿಗೆ ಮುಂಬಡ್ತಿಯನ್ನು ನೀಡಲಾಗುವುದು?